**Akashvani : Bangalore**
**Regional Bulletin In Kannada**
**07.04.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**07.04.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ವಿಧಾನಸಭಾ ಉಪಚುನಾವಣೆ; ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ; ಅಭ್ಯರ್ಥಿಗಳ ಪರ ರಾಜಕೀಯ ಮುಖಂಡರ ಬಿರುಸಿನ ಪ್ರಚಾರ**

**೨. ರಾಜ್ಯದಲ್ಲಿ ಎಲ್‌ಪಿಜಿ, ಇಂಧನ ಬಿಕ್ಕಟ್ಟು; ಕೇಂದ್ರ ಸರ್ಕಾರ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ**

**೩. ಅಕ್ರಮ ಆಸ್ತಿ ಗಳಿಕೆ ಆರೋಪ; ರಾಜ್ಯದ ಹಲವೆಡೆ ಲೋಕಾಯುಕ್ತ ಅಧಿಕಾರಿಗಳಿಂದ ದಾಳಿ; ದಾಖಲೆಗಳ ಪರಿಶೀಲನೆ**

**೪. ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ದುಬೈ, ಅಬುದಾಬಿಗೆ ಇಂದಿನಿಂದ ವಿಮಾನ ಸಂಚಾರ ಆರಂಭ**

**೫. ಇಂದು ವಿಶ್ವ ಆರೋಗ್ಯ ದಿನ; ರಾಜ್ಯದೆಲ್ಲೆಡೆ ಸರ್ಕಾರದಿಂದ ಜಾಗೃತಿ ಕಾರ್ಯಕ್ರಮ**

**<><*<><>*><>**

ವಿಧಾನಸಭಾ ಉಪಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ ಬೀಳಲಿದೆ. ನಾಳೆ ಮನೆ ಮನೆ ಪ್ರಚಾರಕ್ಕೆ ಮಾತ್ರ ಅವಕಾಶ ನೀಡಲಾಗಿದೆ ಎಂದು ದಾವಣಗೆರೆ ಚುನಾವಣಾಧಿಕಾರಿ ಸಂತೋಷ್ ಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಸಂಬಂಧ ದೂರುಗಳು ಬರುತ್ತಿದ್ದು, ಅಕ್ರಮ ತಡೆ ತಂಡ ಸೂಕ್ತ ಕ್ರಮ ಕೈಗೊಳ್ಳುತ್ತಿದೆ. ಮತದಾರರಲ್ಲದವರು ಮತದಾನ ಮುಗಿಯುವವರೆಗೂ ಕ್ಷೇತ್ರದಿಂದ ಹೊರ ಹೋಗಬೇಕೆಂದು ಸೂಚಿಸಿದ್ದಾರೆ. ನೀತಿ ಸಂಹಿತೆ ಜಾರಿಯಾದಾಗಿನಿಂದ ಇದುವರೆಗೂ ದಾಖಲೆ ಇಲ್ಲದೆ ಸಾಗಿಸುತ್ತಿದ್ದ ೧೫ ಲಕ್ಷ ರೂಪಾಯಿ ನಗದು, ೨೩೩ ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ. ಇದೇ ೯ರಂದು ಮತದಾನ ನಡೆಯಲಿದ್ದು, ಮತದಾರರು ಶಾಂತಿಯುತವಾಗಿ ತಮ್ಮ ಹಕ್ಕನ್ನು ಚಲಾಯಿಸಲು ಎಲ್ಲಾ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಉಪಚುನಾವಣೆಗೆ ಒಟ್ಟು ೨೧೧ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಪ್ರತಿಯೊಂದು ಮತಗಟ್ಟೆಗೆ ಪ್ರಿಸೈಡಿಂಗ್ ಅಧಿಕಾರಿ ಸೇರಿದಂತೆ ಸಿಬ್ಬಂದಿ ನೇಮಕ ಮಾಡಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಮತದಾರರು ಯಾವುದೇ ಪ್ರಭಾವಕ್ಕೆ ಒಳಗಾಗದೇ, ಸ್ವತಂತ್ರವಾಗಿ ತಮ್ಮ ಮತದಾನ ಹಕ್ಕನ್ನು ಚಲಾಯಿಸುವಂತೆ ಮನವಿ ಮಾಡಿದ್ದಾರೆ.

**<><*<><>*><>**

ದಾವಣಗೆರೆಯಲ್ಲಿ ಬಹಿರಂಗ ಪ್ರಚಾರಕ್ಕೆ ಅಂತಿಮ ದಿನವಾದ ಇಂದು ವಿವಿಧ ರಾಜಕೀಯ ಪಕ್ಷಗಳ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ್ ಪರವಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಕ್ರಿಕೆಟಿಗ ಅಜರುದ್ದೀನ್ ಮತಯಾಚಿಸಿದರು.  ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಮಾಜಿ ಕೇಂದ್ರ ಸಚಿವ ಡಾ.ಜಿ.ಎಂ.ಸಿದ್ದೇಶ್ವರ್, ಶಾಸಕ ಬಿ.ಪಿ.ಹರೀಶ್ ಸೇರಿದಂತೆ ಹಲವು ನಾಯಕರು ಮತ ಪ್ರಚಾರ ನಡೆಸಿದರು. ಇನ್ನೊಂದೆಡೆ ಬಾಗಲಕೋಟೆಯಲ್ಲಿಯೂ ಚುನಾವಣಾ ಪ್ರಚಾರ ಗರಿಗೆದರಿದೆ. ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಯಾಚಿಸಿದರು. ಉಪಚುನಾವಣೆ ಅಂಗವಾಗಿ ಆಯೋಜಿಸಲಾಗಿದ್ದ ಪಂಚಮ ಸಾಲಿ ಲಿಂಗಾಯತ ಮುಖಂಡರುಗಳ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಉಮೇಶ್ ಮೇಟಿ ಅವರನ್ನು ಗೆಲ್ಲಿಸುವಂತೆ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಸಚಿವ ಶಿವಾನಂದ ಪಾಟೀಲ್, ಶಾಸಕರಾದ ವಿಜಯಾನಂದ ಕಾಶ್ಯಪ್ಪನವರ್, ಬಿ.ಆರ್.ಪಾಟೀಲ್ ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದರು. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರ ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಶ್ರೀರಾಮುಲು ಮತಯಾಚಿಸಿದರು.

**<><*<><>*><>**

ರಾಜ್ಯದಲ್ಲಿ ಎಲ್‌ಪಿಜಿ ಮತ್ತು ಇಂಧನ ಬಿಕ್ಕಟ್ಟು, ಆಟೋ ಚಾಲಕರು, ಗಿಗ್ ಕಾರ್ಮಿಕರು ಹಾಗೂ ಲಕ್ಷಾಂತರ ಮಂದಿಯ ಜೀವನೋಪಾಯದ ಮೇಲೆ ಪರಿಣಾಮ ಬೀರಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಜಂಟಿ ಹೇಳಿಕೆಯಲ್ಲಿ ತಿಳಿಸಿರುವ ಅವರು, ಕೇಂದ್ರ ಸರ್ಕಾರದ ಎಲ್‌ಪಿಜಿ ಮತ್ತು ಇಂಧನ ವ್ಯವಸ್ಥೆಯ ಅಸಮರ್ಥ ನಿರ್ವಹಣೆಯು ರಾಜ್ಯದ ಜನರ ಜೀವನೋಪಾಯವನ್ನು ನಾಶಪಡಿಸಿದೆ. ಇಂಧನ, ಆಟೋ ಎಲ್‌ಪಿಜಿ ಗಾಗಿ ನಿಂತಿರುವ ಸರತಿ ಸಾಲು ಕೇಂದ್ರ ಸರ್ಕಾರದ ವೈಫಲ್ಯದ ಸಂಕೇತವಾಗಿದೆ ಎಂದು ದೂರಿದ್ದಾರೆ. ಇಂಧನ ಅನಿಲದ ದೈನಂದಿನ ಪೂರೈಕೆಯು ೧೨ ಸಾವಿರದಿಂದ ೬ ಸಾವಿರ ಲೀಟರ್‌ಗೆ ಕುಸಿದಿದಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಅಕ್ರಮ ಆಸ್ತಿ ಗಳಿಸಿರುವ ಆರೋಪದ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಇಂದು ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ. ಬಳ್ಳಾರಿ, ಚಿತ್ರದುರ್ಗ, ಮೈಸೂರು ಹಾಗೂ ಶಿವಮೊಗ್ಗದಲ್ಲಿ ಅಧಿಕಾರಿಗಳು ದಾಳಿ ನಡೆಸಿ, ಅಧಿಕಾರಿಗಳಿಗೆ ಸಂಬಂಧಿಸಿದ ದಾಖಲೆಗಳು ಮತ್ತು ಆಸ್ತಿಗಳನ್ನು ಪರಿಶೀಲಿಸಿದ್ದಾರೆ. ಚಿತ್ರದುರ್ಗದಲ್ಲಿ ಒಂದು ವರ್ಷದ ಹಿಂದೆ ಸ್ವಯಂ ನಿವೃತ್ತಿ ಪಡೆದಿದ್ದ ನಿರ್ಮಿತ ಕೇಂದ್ರದ ಮಾಜಿ ಲೆಕ್ಕ ಪರಿಶೋಧಕಿಯ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ. ಬಳ್ಳಾರಿಯಲ್ಲಿ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರ ನಿವಾಸ ಮತ್ತು ಕಚೇರಿಯಲ್ಲಿ ಲೋಕಾಯುಕ್ತ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಮೈಸೂರಿನ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಅವರ ಮೈಸೂರಿನ ಕಚೇರಿ ಹಾಗೂ ಮಂಡ್ಯ ಜಿಲ್ಲೆಯ ೨ ನಿವಾಸಗಳ ಮೇಲೆ ದಾಳಿ ನಡೆಸಿ, ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಶಿವಮೊಗ್ಗದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಯ  ಶಿವಮೊಗ್ಗ, ಶಿಕಾರಿಪುರ ಮತ್ತು ಸಾಗರದಲ್ಲಿರುವ ನಿವಾಸಗಳ ಮೇಲೆ ದಾಳಿ ನಡೆದಿದೆ.

<><*<><>*><>

ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ದುಬೈ ಮತ್ತು ಅಬುಧಾಬಿಗೆ ಏರ್ ಇಂಡಿಯಾ ಎಕ್ಸ್‌ಪ್ರೆಸ್ ಇಂದು ವಿಮಾನ ಸಂಚಾರ ಆರಂಭಿಸಿದೆ ಎಂದು ವಿಮಾನ ನಿಲ್ದಾಣದ ಪ್ರಕಟಣೆ ತಿಳಿಸಿದೆ. ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ- ಕುವೈತ್ ನಡುವೆ ಜಝೀರಾ ಏರ್‌ವೇಸ್ ಇದೇ ೮ರಿಂದ ವಾರಕ್ಕೆ ಎರಡು ಬಾರಿ ವಿಮಾನ ಸಂಚಾರ ಆರಂಭಿಸಲಿದೆ. ಈ ವಿಮಾನಗಳು ಬುಧವಾರ ಮತ್ತು ಭಾನುವಾರ ಸಂಚಾರ ನಡೆಸಲಿವೆ. ವಿಮಾನವು ಕುವೈತ್‌ನಿಂದ ದಮ್ಮಾಮ್ ಮೂಲಕ ಮಂಗಳೂರಿಗೆ ಆಗಮಿಸಲಿದೆ. ಪ್ರಯಾಣಿಕರು

ದಮ್ಮಾಮ್‌ನಲ್ಲಿ ಸೌದಿ ಗಡಿ ಪರಿಶೀಲನೆಗೆ ಒಳಗಾಗಲಿದ್ದಾರೆ ಎಂದು ವಿಮಾನ ನಿಲ್ದಾಣದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

<><*<><>*><>

ಇಂದು ವಿಶ್ವ ಆರೋಗ್ಯ ದಿನ. ಆರೋಗ್ಯದ ಮಹತ್ವವನ್ನು ಸಾರುವ ನಿಟ್ಟಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಸೂಚನೆಯಂತೆ ವಿಶ್ವ ಆರೋಗ್ಯ ದಿನ ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನಿತ್ಯ ವ್ಯಾಯಾಮ, ಸಮತೋಲಿತ ಆಹಾರ ಮತ್ತು ಮಾನಸಿಕ ಒತ್ತಡ ನಿರ್ವಹಣೆ ಕೌಶಲ್ಯಗಳು ಉತ್ತಮ ಆರೋಗ್ಯದ ಕೀಲಿಕೈಗಳು ಎಂದು ತಿಳಿಸಿದ್ದಾರೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಆರೋಗ್ಯಯುತ ಕರ್ನಾಟಕ ನಿರ್ಮಿಸುವ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ. ನಾವೆಲ್ಲರೂ ವಿಜ್ಞಾನದೊಂದಿಗೆ ನಿಲ್ಲೋಣ ಮತ್ತು ಆರೋಗ್ಯದ ಕಡೆಗೆ ಒಟ್ಟಾಗಿ ಕಾರ್ಯ ನಿರ್ವಹಿಸೋಣ ಎಂದು ಕರೆ ನೀಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆ ಇಂದು ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಾಗೂ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿತ್ತು. ದೊಡ್ಡಬಳ್ಳಾಪುರಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀ ಶೈಲ ಭೀಮಸೇನ ಬಾಗಡಿ ಮಾತನಾಡಿ, ಇಂದಿನ ಯುವ ಸಮೂಹ ದುಷ್ಚಟಗಳಿಗೆ ದಾಸರಾಗಿ, ಆರೋಗ್ಯ ಹಾಳು ಮಾಡಿಕೊಳ್ಳುತ್ತಿರುವುದು ವಿಷಾದಕರ ಎಂದು ತಿಳಿಸಿದ್ದಾರೆ.

<><*<><>*><>

ಲೋಕಸಭಾ ಮತ್ತು ವಿಧಾನಸಭಾ ಕ್ಷೇತ್ರಗಳ ಮರುವಿಂಗಡಣೆಯಿಂದ ದಕ್ಷಿಣ ಭಾರತದ ರಾಜ್ಯಗಳಲ್ಲಿ ಕ್ಷೇತ್ರಗಳು ಕಡಿಮೆಯಾಗುವುದರ ಜೊತೆಗೆ ಆರ್ಥಿಕ ಮುಗ್ಗಟ್ಟು ಎದುರಿಸಬೇಕಾಗುತ್ತದೆ ಎಂದು ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ತೆರಿಗೆಗಳು ಉತ್ತರದ ರಾಜ್ಯಗಳಿಗೆ ಹಂಚಿಕೆಯಾಗಲಿದೆ ಎಂದು ತಿಳಿಸಿದ್ದಾರೆ. ಉಪಚುನಾವಣೆ ನಡೆಯುತ್ತಿರುವ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><*<><>*><>

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇದೇ ೨೨ ರಿಂದ ಜಾನುವಾರುಗಳಿಗೆ ಉಚಿತ ಕಾಲು ಬಾಯಿ ಲಸಿಕೆ ಹಾಕುವ ಅಭಿಯಾನ ಹಮ್ಮಿಕೊಳ್ಳಲಾಗಿದ್ದು ರೈತರು ತಪ್ಪದೇ ತಮ್ಮ

ಜಾನುವಾರುಗಳಿಗೆ ಉಚಿತ ಕಾಲುಬಾಯಿ ಲಸಿಕೆ ಹಾಕಿಸಿ ಎಂದು ಎಂದು ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ತಿಳಿಸಿದ್ದಾರೆ.

೨. ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಇದೇ ೨೦ ರಂದು ವಿಜೃಂಭಣೆಯಿಂದ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

೩. ಜಿಲ್ಲೆಯ ಅಭಿವೃದ್ಧಿ ಮಾಡುವುದು ಆಯಾ ಶಾಸಕರ ಕರ್ತವ್ಯವಾಗಿದೆ ಎಂದು ಮಂಡ್ಯ ಶಾಸಕ ರವಿಕುಮಾರ್ ಗಣಿಗ ತಿಳಿಸಿದ್ದಾರೆ. ಜಾನಪದ ಜಾತ್ರೆ -೨೦೨೬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಮಹಿಳಾ ಸರ್ಕಾರಿ ಕಾಲೇಜಿನಲ್ಲಿ ೧ ಕೋಟಿ ರೂಪಾಯಿ ವೆಚ್ಚದಲ್ಲಿ ಹವಾನಿಯಂತ್ರಣ ಕೊಠಡಿ ಒಳಗೊಂಡಂತೆ ಲೇಡಿಸ್ ಲಾಂಜ್ ನಿರ್ಮಾಣ ಮಾಡಲು ಅನುಮತಿ ದೊರೆತಿದ್ದು ಇನ್ನೂ ಹತ್ತು ದಿನಗಳಲ್ಲಿ ಕಾಮಗಾರಿ ಪ್ರಾರಂಭವಾಗಲಿದೆ ಎಂದು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**